ಆ. ಮಂಜೂರಾಗಿರುವ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಈ ಕೆಳಕಂಡಂತೆ ಇದೆ.

ಹುದ್ದೆಯ ಹೆಸರು	ಮಂಜೂರಾದ	ಕಾರ್ಯನಿರತ	ಖಾಲಿ
ವೈದ್ಯರು.....	5	5	-
ಫಾರ್ಮಸಿಸ್ಟ್.....	2	2	-
ಕ್ಷ-ಕಿರಣ ತಂತ್ರಜ್ಞ...	1	1	-
ಪ್ರಯೋಗ ಶಾಲಾ ತಂತ್ರಜ್ಞರು....	2	2	-
ಶುಶ್ರೂಷಕರು.....	4	4	-
ಇತರರು.....	27	24	3

ಇ, ಉದ್ಭವಿಸುವುದಿಲ್ಲ.

ಉಚ್ಚಗಾಂ ಕ್ಷೇತ್ರದ ಮಣ್ಣೂರಿನಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಮರಾಠಿ ವಿಭಾಗ ತೆರೆಯುವ ಕುರಿತು.

1838(2300)

ಶ್ರೀ ಮನೋಹರ್ ಪುನ್ನಪ್ಪ ಕಾಡೊಲ್ಕರ್(ಉಚ್ಚಗಾಂವ್): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ. ಉಚ್ಚಗಾಂ ಕ್ಷೇತ್ರದ ಮಣ್ಣೂರಿನಲ್ಲಿ ಹೊಸದಾಗಿ ಆರಂಭವಾಗಿರುವ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯಲ್ಲಿ ಮರಾಠಿ ವಿಭಾಗ ತೆರೆಯಲು ಸರ್ಕಾರವು ಅಗತ್ಯ ಕ್ರಮ ಕೈಗೊಳ್ಳುವುದೇ?

ಶ್ರೀ ಹೆಚ್.ವಿಶ್ವನಾಥ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ. ಬೆಳಗಾವಿ ಜಿಲ್ಲೆಯ ಮಣ್ಣೂರಿನಲ್ಲಿರುವ ಜಿಲ್ಲಾ ಶಿಕ್ಷಣ ತರಬೇತಿ ಸಂಸ್ಥೆಯು ಹೊಸದಾಗಿ ಪ್ರಾರಂಭವಾದ ಸಂಸ್ಥೆಯಲ್ಲ. ಅಲ್ಲದೆ, ಬೆಳಗಾವಿ ಜಿಲ್ಲೆಯಲ್ಲಿ ಈಗಾಗಲೇ ಮರಾಠಿ ವಿಭಾಗಗಳನ್ನು ಹೊಂದಿರುವ ಮೂರು ಶಿಕ್ಷಕ ತರಬೇತಿ ಸಂಸ್ಥೆಗಳಿದ್ದು

ಇವುಗಳು ರಾಜ್ಯದ ಅವಶ್ಯಕತೆಗೆ ಸೇಕಾಗುವ ಶಿಕ್ಷಕರ ಪೂರೈಕೆ ಮಾಡುತ್ತಿರುವುದರಿಂದ, ಹೆಚ್ಚುವರಿ ವಿಭಾಗಗಳ ಅವಶ್ಯಕತೆ ಇರುವುದಿಲ್ಲ.

ಗುಂಡ್ಲುಪೇಟೆ ತಾಲ್ಲೂಕಿನ ಕಬ್ಬಳ್ಳಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವೈದ್ಯಾಧಿಕಾರಿಯನ್ನು ನೇಮಿಸುವುದು.

1840(2621)

ಮಹಾದೇವ ಪ್ರಸಾದ್ ಹೆಚ್.ಎಸ್.(ಗುಂಡ್ಲುಪೇಟೆ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲ್ಲೂಕಿನ ಕಬ್ಬಳ್ಳಿ ಗ್ರಾಮದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಹಿಳಾ ವೈದ್ಯಾಧಿಕಾರಿಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಆ) ಪ್ರಸ್ತುತ 30 ಹಾಸಿಗೆಯುಳ್ಳ ಆಸ್ಪತ್ರೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಇರುವ ವೈದ್ಯರು ಇರುತ್ತಾರೆ, ಸದರಿ ಆಸ್ಪತ್ರೆಗೆ ನುರಿತ ವೈದ್ಯರನ್ನು ನಿಯೋಜಿಸಲು ಕೈಗೊಂಡ ಕ್ರಮಗಳೇನು?

ಡಾ: ಎ.ಜಿ.ಮಾಲಕರೆಡ್ಡಿ(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಇಲ್ಲ.

ಆ) ಹಾಲಿ ಒಬ್ಬ ಖಾಯಂ ವೈದ್ಯರು, ಮಹಿಳಾ ವೈದ್ಯರು ಸೇರಿ ಇಬ್ಬರು ಗುತ್ತಿಗೆ ವೈದ್ಯರು ಮತ್ತು ಒಬ್ಬರು ದಂತ ವೈದ್ಯರು ಕಾರ್ಯನಿರ್ವಹಿಸುತ್ತಿದ್ದು ಬೇರೆ ವೈದ್ಯರನ್ನು ನಿಯೋಜಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಗುಂಡ್ಲುಪೇಟೆ ಆಸ್ಪತ್ರೆ ಏಸ್ತರಾಜ್ ಕಾಮಗಾರಿ.

1841(2622)

ಶ್ರೀ ಮಹದೇವ ಪ್ರಸಾದ್ ಹೆಚ್.ಎಸ್.(ಗುಂಡ್ಲುಪೇಟೆ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?